# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 08.01.2025 ರಂದು ಪೂರ್ವಾಹ್ನ ಗಂಟೆ 11.00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ರಾಣಿ ಅಬ್ಬಕ್ಕ ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಮಂಡಳಿಯ 2024-25ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಡವಳಿಗಳು.**

**ಉಪಸ್ಥಿತರು**

**ಅನುಪಸ್ಥಿತರು**

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು, ಎಲ್ಲಾ ಸದಸ್ಯರುಗಳನ್ನು, ವಿಶೇಷ ಆಹ್ವಾನಿತರನ್ನು, ಆಡಳಿತ ಸಿಬ್ಬಂದಿ ಮತ್ತು ಮಾಧ್ಯಮ ಮಿತ್ರರನ್ನು ಸಭೆಗೆ ಸ್ವಾಗತಿಸಿ, ಸಭಾಧ್ಯಕ್ಷರಲ್ಲಿ ಸಭೆಯನ್ನು ಮುಂದುವರಿಸುವಂತೆ ಕೋರಿದರು. ಮಾನ್ಯ ಕುಲಪತಿಯವರು ಮತ್ತೊಮ್ಮೆ ಎಲ್ಲರನ್ನೂ ಸಭೆಗೆ ಸ್ವಾಗತಿಸಿ, 2025ರ ಹೊಸ ವರ್ಷದ ಶುಭಾಶಯ ಕೋರಿ ಸಭೆಯನ್ನು ಪ್ರಾರಂಭಿಸಿದರು.

- **ಸ್ವಾಗತ:**

  ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(viii)ರ ಪ್ರಕಾರ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ **ಪ್ರೊ. ಜಯರಾಜ್ ಅಮೀನ್,** ಪ್ರಾಧ್ಯಾಪಕರು, ರಾಜ್ಯಶಾಸ್ತ್ರ ವಿಭಾಗ, **ಪ್ರೊ. ವಿಶಾಲಾಕ್ಷಿ ಬಿ.,** ಹಿರಿಯ ಪ್ರಾಧ್ಯಾಪಕರು, ರಸಾಯನಶಾಸ್ತ್ರ ವಿಭಾಗ ಹಾಗೂ **ಪ್ರೊ. ರವೀಂದ್ರಾಚಾರಿ ವಿ.,** ಹಿರಿಯ ಪ್ರಾಧ್ಯಾಪಕರು, ಭೌತಶಾಸ್ತ್ರ ವಿಭಾಗ ಇವರುಗಳನ್ನು ಶೈಕ್ಷಣಿಕ ಮಂಡಳಿ ಸಭೆಗೆ ಸ್ವಾಗತಿಸಲಾಯಿತು.

- ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(ix)ರ ಪ್ರಕಾರ ವಿಶ್ವವಿದ್ಯಾನಿಲಯದ ಶಿಕ್ಷಣ ನಿಕಾಯದ ಡೀನರ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿರುವ **ಡಾ. ಕಿಶೋರ್ ಕುಮಾರ್ ಸಿ.ಕೆ. ನಿರ್ದೇಶಕರು, ದೈಹಿಕ ಶಿಕ್ಷಣ** ಇವರನ್ನು ಶೈಕ್ಷಣಿಕ ಮಂಡಳಿ ಸಭೆಗೆ ಸ್ವಾಗತಿಸಲಾಯಿತು.

- ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(ix)ರ ಪ್ರಕಾರ ವಿಶ್ವವಿದ್ಯಾನಿಲಯದ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಡೀನರ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿರುವ **ಪ್ರೊ. ಮಂಜಯ್ಯ ಡಿ.ಹೆಚ್., ಹಿರಿಯ ಪ್ರಾಧ್ಯಾಪಕರು, ಗಣಕ ವಿಜ್ಞಾನ ವಿಭಾಗ** ಇವರನ್ನು ಶೈಕ್ಷಣಿಕ ಮಂಡಳಿ ಸಭೆಗೆ ಸ್ವಾಗತಿಸಲಾಯಿತು.

## ಕೃತಜ್ಞತೆಗಳು:

- ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(vi)ರ ಪ್ರಕಾರ ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ **ಡಾ. ಜೋಶ್ನ ರಾವ್, ಕೆ.,** ಪ್ರಾಂಶುಪಾಲರು, ಶ್ರೀ ಪ್ರೇಮಕಾಂತಿ ಕಾಲೇಜ್ ಆಫ್ ಎಜುಕೇಶನ್, ಮಂಗಳೂರು ಹಾಗೂ **ಶ್ರೀಮತಿ ಸೆಮೀರ ಕೆ.ಎ.,** ಪ್ರಾಂಶುಪಾಲರು, ಏಮ್ಸ್ ಪ್ರಥಮ ದರ್ಜೆ ಕಾಲೇಜು, ಕಡಬ ಇವರನ್ನು ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿರುತ್ತದೆ.

- ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(viii)ರ ಪ್ರಕಾರ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿದ್ದ **ಪ್ರೊ. ಬಿ.ಆರ್. ಮಂಜುನಾಥ್,** ಹಿರಿಯ ಪ್ರಾಧ್ಯಾಪಕರು, ಸಾಗರ ಭೂ ವಿಜ್ಞಾನ ವಿಭಾಗ ಇವರು ದಿನಾಂಕ **31.10.2024** ರಂದು ವಯೋನಿವೃತ್ತಿ ಹೊಂದಿರುವುದರಿಂದ ಸದರಿಯವರನ್ನು ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿರುತ್ತದೆ.

- ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(ix)ರ ಪ್ರಕಾರ ವಿಶ್ವವಿದ್ಯಾನಿಲಯದ ಶಿಕ್ಷಣ ನಿಕಾಯದ ಡೀನರ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿದ್ದ **ಡಾ. ಜೆರಾಲ್ಡ್ ಸಂತೋಷ್ ಡಿ'ಸೋಜ, ನಿರ್ದೇಶಕರು, ದೈಹಿಕ ಶಿಕ್ಷಣ** ಇವರ ಡೀನ್ ಸ್ಥಾನದ ಅವಧಿ ದಿನಾಂಕ **06.11.2024** ರಂದು ಕೊನೆಗೊಂಡಿರುವುದರಿಂದ ಸದರಿಯವರನ್ನು ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿರುತ್ತದೆ.

- ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(ix)ರ ಪ್ರಕಾರ ವಿಶ್ವವಿದ್ಯಾನಿಲಯದ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಡೀನರ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿದ್ದ **ಪ್ರೊ. ಜಯಶಂಕರ್ ಎಂ.,** ಹಿರಿಯ ಪ್ರಾಧ್ಯಾಪಕರು (ಸೂಕ್ಷ್ಮಾಣು ಜೀವವಿಜ್ಞಾನ) ಇವರ ಡೀನ್ ಸ್ಥಾನದ ಅವಧಿ ದಿನಾಂಕ **30.11.2024** ರಂದು ಕೊನೆಗೊಂಡಿರುವುದರಿಂದ ಸದರಿಯವರನ್ನು ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿರುತ್ತದೆ.

ಇವರೆಲ್ಲರೂ ಶೈಕ್ಷಣಿಕ ಮಂಡಳಿಯ ಸದಸ್ಯರಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುತ್ತಾರೆ. ಇವರೆಲ್ಲರಿಗೂ ಶೈಕ್ಷಣಿಕ ಮಂಡಳಿಯ ಪರವಾಗಿ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

**I. ದಿನಾಂಕ 18.09.2024 ರಂದು ನಡೆದ (ಆನ್‌ಲೈನ್ ಮೂಲಕ) ಶೈಕ್ಷಣಿಕ ಮಂಡಳಿಯ 2023-24ನೇ ಸಾಲಿನ ದ್ವಿತೀಯ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.**

-ದೃಢೀಕರಿಸಲಾಯಿತು.-

**II. ಘನತೆವೆತ್ತ ಕುಲಾಧಿಪತಿಗಳಿಂದ ಅನುಮೋದನೆಗೊಂಡ ವಿನಿಯಮಗಳು /ಪರಿನಿಯಮಗಳು**

-ಯಾವುದೂ ಇರುವುದಿಲ್ಲ.-

**III. ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು:**

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.:3:1 (2024-25)

**ವಿಷಯ:** ಸ್ನಾತಕೋತ್ತರ ಕಾರ್ಯಕ್ರಮಗಳ ವಿದ್ಯಾರ್ಥಿ ಪ್ರವೇಶಾರ್ಹತೆ ತಿದ್ದುಪಡಿ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು ಹಾಗೂ ಸರ್ಕಾರದ ಅನುಮೋದನೆಗೆ ಸಲ್ಲಿಸಲು ಸೂಕ್ತ ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.3:2 (2024-25)

**ವಿಷಯ:** ಸ್ನಾತಕೋತ್ತರ ಇಂಗ್ಲೀಷ್ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.3:3 (2024-25)

**ವಿಷಯ:** ಸ್ನಾತಕೋತ್ತರ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.3:4 (2024-25)

**ವಿಷಯ:** ಸ್ನಾತಕೋತ್ತರ ಹಿಂದಿ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.3:5 (2024-25)

**ವಿಷಯ:** ಬಿ.ಎ.ಎಸ್.ಎಲ್.ಪಿ. ಪದವಿ ಕಾರ್ಯಕ್ರಮವನ್ನು ನಿಯಂತ್ರಿಸುವ ವಿನಿಯಮಕ್ಕೆ ತಿದ್ದುಪಡಿ - ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು ಹಾಗೂ ಸರ್ಕಾರದ ಅನುಮೋದನೆಗೆ ಸಲ್ಲಿಸಲು ಸೂಕ್ತ ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.3:6 (2024-25)

**ವಿಷಯ:** ಶೈಕ್ಷಣಿಕ ವರ್ಷ 2024-25ನೇ ಸಾಲಿಗೆ ಅನ್ವಯವಾಗುವ ರಾಜ್ಯ ಶಿಕ್ಷಣ ನೀತಿ ಆಯೋಗದ ಮಾರ್ಗಸೂಚಿ ಪ್ರಕಾರ ತಯಾರಿಸಿರುವ ಬಿ.ವಿ.ಎ. ಪದವಿ ಕಾರ್ಯಕ್ರಮದ ಪ್ರಥಮ ಮತ್ತು ದ್ವಿತೀಯ ಸೆಮಿಸ್ಟರ್‌ಗಳ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.3:7 (2024-25)

**ವಿಷಯ:** ಶೈಕ್ಷಣಿಕ ವರ್ಷ 2024-25ನೇ ಸಾಲಿಗೆ ಅನ್ವಯವಾಗುವ ರಾಷ್ಟ್ರೀಯ ಶಿಕ್ಷಣ ನೀತಿ 2020ರ ಪ್ರಕಾರ ತಯಾರಿಸಿರುವ ಬಿ.ಹೆಚ್.ಎಂ. ಪದವಿ ಕಾರ್ಯಕ್ರಮದ ಎಂಟನೇ ಸೆಮಿಸ್ಟರ್‌ನ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.3:8 (2024-25)

**ವಿಷಯ:** ಸೈಂಟ್ ಆನ್ಸ್ ಕಾಲೇಜ್ ಆಫ್ ಎಜ್ಯುಕೇಶನ್ (ಸ್ವಾಯತ್ತ), ಮಂಗಳೂರು ವಿದ್ಯಾಸಂಸ್ಥೆಯಲ್ಲಿ ಶೈಕ್ಷಣಿಕ ವರ್ಷ 2024-25ನೇ ಸಾಲಿನಿಂದ ಸ್ನಾತಕ ಪದವಿಯಲ್ಲಿ Co-Education System ಪ್ರಾರಂಭಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.3:9 (2024-25)

**ವಿಷಯ:** ಸ್ನಾತಕೋತ್ತರ ಕಾರ್ಯಕ್ರಮಗಳ ಪಠ್ಯಕ್ರಮಗಳಲ್ಲಿ ಉದ್ಯೋಗಾವಕಾಶ ಉದ್ಯಮಶೀಲತೆ, ಕೌಶಲ್ಯ ಅಭಿವೃದ್ಧಿಯ ವಿಷಯಾಧಾರಿತ ಕೋರ್ಸ್‌ಗಳ ಪಟ್ಟಿಯ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು. ಈ ರೀತಿಯ ಹೊಸ ಕೋರ್ಸ್ ಗಳಿಗೆ ಅಗತ್ಯವಾದ ನುರಿತ ಶಿಕ್ಷಕರ ಲಭ್ಯತೆಯನ್ನು ಖಚಿತಪಡಿಸಿಕೊಳ್ಳುವುದರೊಂದಿಗೆ ಇಂತಹ ಕೋರ್ಸ್ ಗಳನ್ನು ಆನ್ ಲೈನ್ ಮೂಕ್ ಕೋರ್ಸ್ ಗಳೊಂದಿಗೆ ಜೋಡಿಸಿಕೊಳ್ಳುವ ನಿಟ್ಟಿನಲ್ಲಿ ಕ್ರಮಕೈಗೊಳ್ಳುವಂತೆ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.3:10 (2024-25)

**ವಿಷಯ:** ವಿವೇಕಾನಂದ ಕಾಲೇಜ್ ಆಫ್ ಆರ್ಟ್ಸ್, ಸೈನ್ಸ್ ಆಂಡ್ ಕಾಮರ್ಸ್, ಪುತ್ತೂರು ಇಲ್ಲಿ ಹೊಸ ಪದವಿ ಕಾರ್ಯಕ್ರಮಗಳಾದ ಬಿ.ಸಿ.ಎ. (ಆರ್ಟಿಫಿಷಲ್ ಇಂಟೆಲಿಜೆನ್ಸಿ ಆಂಡ್ ಮೆಷಿನ್ ಲರ್ನಿಂಗ್), ಬಿ.ಸಿ.ಎ. (ಡಾಟಾ ಅನಾಲಿಟಿಕ್ಸ್) ಮತ್ತು ಬಿ.ಎ./ಬಿ.ಎಸ್ಸಿ. ಕಾರ್ಯಕ್ರಮಗಳಲ್ಲಿ ಹೊಸ ಸಹಯೋಗಗಳನ್ನು ಪ್ರಾರಂಭಿಸಿರುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು. ಸ್ವಾಯತ್ತ ಕಾಲೇಜುಗಳಿಗೆ ಪರಿಶೀಲನೆ ಮತ್ತು ಮೌಲ್ಯಮಾಪನ ಸಮಿತಿ ಭೇಟಿ ನೀಡುವ ಸಂದರ್ಭದಲ್ಲಿ ವಿಶ್ವವಿದ್ಯಾನಿಲಯವು

ನಿಗದಿಪಡಿಸಿರುವ ಮಾನದಂಡಗಳನ್ನು ಸ್ವಾಯತ್ತ ಕಾಲೇಜುಗಳು ಪಾಲಿಸಿರುವ ಬಗ್ಗೆ ಕಡ್ಡಾಯವಾಗಿ ಪರಿಶೀಲಿಸುವಂತೆ ಸಮಿತಿಗೆ ಸೂಚಿಸಲು ನಿರ್ಣಯಿಸಲಾಯಿತು. ಸ್ವಾಯತ್ತ ಕಾಲೇಜುಗಳು ಯಾವುದೇ ಹೊಸ ಕೋರ್ಸ್/ಕಾರ್ಯಕ್ರಮಗಳನ್ನು ಪ್ರಾರಂಭಿಸುವ ಪೂರ್ವದಲ್ಲಿ ವಿಶ್ವವಿದ್ಯಾನಿಲಯದಿಂದ ನಾಮನಿರ್ದೇಶಿತಗೊಂಡ ಪ್ರತಿನಿಧಿಗಳನ್ನು ಒಳಗೊಂಡಿರುವ ಸ್ವಾಯತ್ತ ಕಾಲೇಜಿನ ಆಡಳಿತ ಮಂಡಳಿ ಮತ್ತು ಶೈಕ್ಷಣಿಕ ಮಂಡಳಿ ಅನುಮೋದನೆಯ ನಿರ್ಣಯದೊಂದಿಗೆ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿ, ವಿಶ್ವವಿದ್ಯಾನಿಲಯದ ಅನುಮತಿ ಪಡೆದ ನಂತರವೇ ಹೊಸ ಕೋರ್ಸ್/ಕಾರ್ಯಕ್ರಮಗಳನ್ನು ಪ್ರಾರಂಭಿಸುವಂತೆ ಸೂಚನೆ ನೀಡಲು ನಿರ್ಣಯಿಸಲಾಯಿತು.

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಮ.ಸಾ.ಸ.3:11 (2024-25) |
| **ವಿಷಯ:** | ಸ್ನಾತಕೋತ್ತರ ಸಂಖ್ಯಾಶಾಸ್ತ್ರ ಕಾರ್ಯಕ್ರಮದ ನಾಲ್ಕನೇ ಸೆಮಿಸ್ಟರಿನ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಸಿಡಿಸಿ:ಶೈ.ಮ.ಸಾ.ಸ.3:12 (2024-25) |
| **ವಿಷಯ:** | ತ್ರಿಶಾ ಕಾಲೇಜ್ ಆಫ್ ಕಾಮರ್ಸ್ ಆಂಡ್ ಮ್ಯಾನೇಜ್‌ಮೆಂಟ್, ಮಂಗಳೂರು ಎಂಬ ವಿದ್ಯಾ ಸಂಸ್ಥೆಯ ಸ್ಥಳ ಬದಲಾವಣೆ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಸಿಡಿಸಿ:ಶೈ.ಮ.ಸಾ.ಸ.3:13 (2024-25) |
| **ವಿಷಯ:** | ತ್ರಿಶಾ ಸಂಧ್ಯಾ ಕಾಲೇಜು, ಕುದ್ರೋಳಿ, ಮಂಗಳೂರು ಎಂಬ ವಿದ್ಯಾಸಂಸ್ಥೆಯ ಸ್ಥಳ ಬದಲಾವಣೆ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ:ಶೈ.ಮ.ಸಾ.ಸ. 3:14 (2024-25)

**ವಿಷಯ:** ಎಸ್.ಸಿ.ಎಸ್. ಪ್ರಥಮ ದರ್ಜೆ ಕಾಲೇಜು, ಕೆಇಸಿಟಿ ಟವರ್ಸ್, ಅಶೋಕನಗರ, ಹೊಯ್ಗೆಗೆಬೈಲು, ಮಂಗಳೂರು ಎಂಬ ವಿದ್ಯಾಸಂಸ್ಥೆಯ ಸ್ಥಳ ಬದಲಾವಣೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ:ಶೈ.ಮ.ಸಾ.ಸ.3:15 (2024-25)

**ವಿಷಯ:** ಶೈಕ್ಷಣಿಕ ವರ್ಷ 2025-26ನೇ ಸಾಲಿಗೆ ವಿಸ್ತರಣಾ ಸಂಯೋಜನೆ ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ಕ್ರಮ ಸಂ. 1 ರಿಂದ 32 ರವರೆಗೆ ತಿಳಿಸಲಾದ ಕಾಲೇಜುಗಳ ಸ್ಥಳೀಯ ವಿಚಾರಣಾ ಸಮಿತಿಯ ವರದಿಗಳನ್ನು ಪರಿಶೀಲಿಸಿ, ಸದರಿ ಸಮಿತಿಗಳು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2025-26ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ವಿಸ್ತರಣಾ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ:ಶೈ.ಮ.ಸಾ.ಸ.3:16 (2024-25)

**ವಿಷಯ:** ಶೈಕ್ಷಣಿಕ ವರ್ಷ 2025-26ನೇ ಸಾಲಿಗೆ ಮುಂದುವರಿಕೆ ಸಂಯೋಜನೆ ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ಕ್ರಮ ಸಂ. 1 ರಿಂದ 135 ರವರೆಗೆ ತಿಳಿಸಲಾದ ಕಾಲೇಜುಗಳ ಸ್ಥಳೀಯ ವಿಚಾರಣಾ ಸಮಿತಿಯ ವರದಿಗಳನ್ನು ಪರಿಶೀಲಿಸಿ, ಸದರಿ ಸಮಿತಿಗಳು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2025-26ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಮುಂದುವರಿಕೆ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ:ಶೈ.ಮ.ಸಾ.ಸ.3:17 (2024-25)

**ವಿಷಯ:** ಶೈಕ್ಷಣಿಕ ವರ್ಷ 2025-26ನೇ ಸಾಲಿಗೆ ಹೊಸ ಶಾಶ್ವತ/ಶಾಶ್ವತ ಸಂಯೋಜನೆ ಮುಂದುವರಿಕೆ ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯಗಳ ವರದಿಗಳನ್ನು ಪರಿಶೀಲಿಸಿ, ಸದರಿ ಸಮಿತಿಗಳು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2025-26ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿದ ವರದಿಯನ್ನು ಅಂಗೀಕರಿಸಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಳೆಯಂಗಡಿ ಹಾಗೂ ಡಾ. ಜಿ. ಶಂಕರ್ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರ, ಅಜ್ಜರಕಾಡು, ಉಡುಪಿ ಇವುಗಳಿಗೆ ಶಾಶ್ವತ ಸಂಯೋಜನೆ ನೀಡಬಹುದೆಂಬುದಾಗಿ ಮತ್ತು ಶ್ರೀ ವೆಂಕಟರಮಣ ಮಹಿಳಾ ಕಾಲೇಜು, ಕಾರ್ಕಳ ಈ ಕಾಲೇಜಿಗೆ ನ್ಯಾಕ್ ನವೀಕರಣ ಮಾಡುವ ಷರತ್ತಿನೊಂದಿಗೆ ಶಾಶ್ವತ ಸಂಯೋಜನೆ ಮುಂದುವರಿಕೆ ನೀಡಬಹುದೆಂಬುದಾಗಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಶೈ.ಮ.ಸಾ.ಸ.3:18 (2024-25)

**ವಿಷಯ:** "DRAFT STATUTE GOVERNING THE ESTABLISHMENT OF DEPARTMENT OF POSTGRADUATE STUDIES AND RESEARCH IN TULU IN MANGALORE UNIVERSITY, MANGALAGANGOTHRI" ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಶೈ.ಮ.ಸಾ.ಸ.3:19 (2024-25)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಬೋಧಕೇತರ ವೃಂದ ಮತ್ತು ನೇಮಕಾತಿ ನಿಯಮಗಳ ಕ್ರೋಢೀಕೃತ ಪರಿಷ್ಕೃತ ಪರಿನಿಯಮಗಳ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಶೈ.ಮ.ಸಾ.ಸ.3:20 (2024-25)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಹಿರಿಯ ಸಹಾಯಕ ಹುದ್ದೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ನಿಯಂತ್ರಿಸುವ ತಿದ್ದುಪಡಿ ಪರಿನಿಯಮಕ್ಕೆ ಸರಕಾರವು ಸೂಚಿಸಿರುವ ತಿದ್ದುಪಡಿಯನ್ನು ಅಳವಡಿಸಿಕೊಳ್ಳುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.3:21 (2024-25)

**ವಿಷಯ:** ಸ್ನಾತಕೋತ್ತರ ವಾಣಿಜ್ಯ ಕಾರ್ಯಕ್ರಮದ ಪಠ್ಯಕ್ರಮಗಳ ಬೋಧನಾವಧಿಗಳ ತಿದ್ದುಪಡಿ ಅನುಮೋದನೆ ಬಗ್ಗೆ

**ನಿರ್ಣಯ:** ಕಾರ್ಯಭಾರದ ಬಗ್ಗೆ ಸಂಪೂರ್ಣ ಮಾಹಿತಿಯೊಂದಿಗೆ ಮುಂದಿನ ಸಭೆಗೆ ಮಂಡಿಸಲು ನಿರ್ಣಯಿಸಿ ಮುಂದೂಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎ.ಸಿ.ಸಿ.:ಶೈ.ಮ.ಸಾ.ಸ.3:22 (2024-25)

**ವಿಷಯ:** ಶೈಕ್ಷಣಿಕ ವರ್ಷ 2024-25 ನೇ ಸಾಲಿನಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುವ ವಿವಿಧ ಸ್ನಾತಕ/ ಸ್ನಾತಕೋತ್ತರ/ ಪಿಹೆಚ್.ಡಿ ಕಾರ್ಯಕ್ರಮಗಳಿಗೆ ವಿದೇಶಿ ವಿದ್ಯಾರ್ಥಿಗಳ ಪ್ರವೇಶಾತಿ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.3:23 (2024-25)

**ವಿಷಯ:** Board of Open Schooling & Skill Education, Sikkim ಬೋರ್ಡ್ ನ್ನು ಮಂಗಳೂರು ವಿಶ್ವವಿದ್ಯಾನಿಲಯದ ಪದವಿ ಕಾರ್ಯಕ್ರಮಗಳ ಪ್ರವೇಶಾತಿಗೆ ಪರಿಗಣಿಸಬಹುದಾದ ಮಾನ್ಯತೆ ಪಟ್ಟಿಗೆ ಸೇರಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಇತರ ವಿಷಯಗಳು:**

1. ಮಂಗಳೂರು ವಿಶ್ವವಿದ್ಯಾನಿಲಯದ ಸಾಂಸ್ಕೃತಿಕ ತಂಡ ಬೆಂಗಳೂರಿನ ಕ್ರೈಸ್ಟ್ ಕಾಲೇಜಿನಲ್ಲಿ ನಡೆದ ದಕ್ಷಿಣ ವಲಯ ಅಂತರ ವಿಶ್ವವಿದ್ಯಾನಿಲಯ ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಪ್ರಥಮ ರನ್ನರ್ಸ್-ಅಪ್ ಪ್ರಶಸ್ತಿ ಪಡೆದಿರುವುದನ್ನು ಸಭೆಯ ಗಮನಕ್ಕೆ ತರಲಾಯಿತು.

2. 2025ರ ಜನವರಿ 29 ರಿಂದ 31 ರವರೆಗೆ ಮೂರು ದಿನಗಳ ರಾಷ್ಟ್ರೀಯ ಸಮ್ಮೇಳನ- International Association of Radiation Protection (IARP) ವಿಶ್ವವಿದ್ಯಾನಿಲಯದ ಆವರಣದಲ್ಲಿ ಜರುಗಲಿದ್ದು, ಸದರಿ ಸಮ್ಮೇಳನದಲ್ಲಿ ಖ್ಯಾತ ವಿಜ್ಞಾನಿಗಳು ಸೇರಿದಂತೆ ಹಲವು ಸಂಶೋಧಕರು ಭಾಗಿಯಾಗಲಿದ್ದಾರೆ ಎಂದು ಸಭೆಗೆ ತಿಳಿಸಲಾಯಿತು.

**ಮಾನ್ಯ ಕುಲಪತಿಯವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.**

| | |
|---|---|
| ಸಹಿ/- | ಸಹಿ/- |
| **ಕುಲಸಚಿವರು** | **ಕುಲಪತಿಗಳು.** |

.